ತೂಗಿರೆ ರಾಯರ ತೂಗಿರೆ ಗುರುಗಳ
ತೂಗಿರೆ ಯತಿಕುಲ ತಿಲಕರ ||ಪ||

ತೂಗಿರೆ ಯೋಗೀಂದ್ರ ಕರಕಮಲ ಪೂಜ್ಯರ
ತೂಗಿರೆ ಗುರು ರಾಘವೇಂದ್ರ ರ ||ಅಪ||

ಕುಂದನ ಮಯವಾದ ಚಂದದ ತೊಟ್ಟಿಲೊಳ್
ಆನಂದದಿ ಮಲಗ್ಯಾರ ತೂಗಿರೆ
ನಂದನ ಕಂದ ಗೋವಿಂದ ಮುಕುಂದನ
ಚಂದದಿ ಭಜಿಪರ ತೋಗಿರೆ ||೧||

ಯೋಗ ನಿದ್ರೆಯಾನ ಬೇಗನೆ ಮಡುವ
ಯೋಗಿಶ್ಯ ವಂದ್ಯರ ತೂಗಿರೆ
ಭೋಗಿಶಯನನ ಪಾದ
ಮೋದದಿ ಭಜಿಪರ ಭಾಗವತರನ್ನ ತೂಗಿರೆ ||೨||

ಅದ್ವೈತ ಮತದ ವಿಧ್ವಂಸದ ನಿಜ ಗುರು
ಮಧ್ವಮತೋದ್ಧಾರನ ತೂಗಿರೆ
ಶುದ್ದ ಸಂಕಲ್ಪದಿ ಬಂದ ನಿಜ ಭಕ್ತರ
ಉಧ್ಧಾರಮಾಲ್ಪರ ತೂಗಿರೆ ||೩ ||

ಭಜಕ ಜನರು ತಮ್ಮ ಭಜಜೆಯ ಮಾಡಲು
ನಿಜ ಗತಿ ಇಬ್ಬರ ತೂಗಿರೆ
ನಿಜ ಗುರು **ಜಗನಾಥ ವಿಠಲ**ನ ಪಾದವ
ಭಜನೆಯ ಮಲ್ಪರಣ ತೂಗಿರೆ ||೪||